ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ 1030ರ ಅನುಬಂಧ

ಅನುಬಂಧ–1

ಕ್ರ ಸಂ	ತಾಲ್ಲೂಕಿನ ಹೆಸರು	ಪ್ರಸಕ್ತ ವರ್ಷ ಮಂಜೂರಾದ ಅಂಗನವಾಡಿ ಕೇಂದ್ರಗಳು	ಆಯ್ಕೆ ಮಾಡಲಾದ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ	ಖಾಲಿ ಹುದ್ದೆಗಳ ಸಂಖ್ಯೆ
1	ಶಿವಮೊಗ್ಗ	90	36	54
2	ಭದ್ರಾವತಿ	44	39	05
3	ಸಾಗರ	82	68	14
4	ಸೊರಬ	99	79	20
5	ಶಿಕಾರಿಮರ	91	82	9
6	ಹೊಸನಗರ	67	57	10
7	ತೀರ್ಥಹಳ್ಳಿ	86	73	13
		559	**434**	**125**

877(1031) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ತಾಲ್ಲೂಕು, ನಗರದಲ್ಲಿರುವ ಬಿದನೂರು ಕೋಟೆಯನ್ನು ಅಭಿವೃದ್ಧಿಪಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ,

ಆ) ಹಾಗಿದ್ದಲ್ಲಿ, ಈ ಕೋಟೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಹೆಚ್ ಎಸ್ ಮಹದೇವ ಪ್ರಸಾದ್ (ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಐತಿಹಾಸಿಕ ಬಿದನೂರು ಕೋಟೆಯು ಕೇಂದ್ರ ಪುರಾತತ್ವ ಇಲಾಖೆಯ ಸಂರಕ್ಷಣಾ ವ್ಯಾಪ್ತಿಯಲ್ಲಿದ್ದು ಈ ಕೋಟೆಯ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾರ್ಯವನ್ನು ಕೇಂದ್ರ ಪುರಾತತ್ವ ಸರ್ವೇಕ್ಷಣವು ಕೈಗೊಳ್ಳುತ್ತಿದೆ

ಆ) ಕೇಂದ್ರ ಪುರಾತತ್ವ ಸರ್ವೇಕ್ಷಣವು ಒದಗಿಸಿರುವ ಮಾಹಿತಿಯ ಪ್ರಕಾರ ಬಿದನೂರಿನ ಐತಿಹಾಸಿಕ ಕೋಟೆಯನ್ನು ಸಂರಕ್ಷಿಸುವಲ್ಲಿ ಕ್ರಮವಹಿಸಿದ್ದು ಕೋಟೆಯ ಬಿದ್ದಿರುವ ಹಾಗೂ ಶಿಥಿಲಗೊಂಡಿರುವ ಕಂದಕಗಳು, ಒಳ ಭಾಗದ

ಗೂಡೆ ಮತ್ತು ಜೀರ್ಣಾವಸ್ಥೆಯಲ್ಲಿರುವ ಅರಮನೆಯ ಅವಶೇಷಗಳನ್ನು ಸಂರಕ್ಷಿಸಿ ಬಲಗೊಳಿಸಲು ಕ್ರಮ ವಹಿಸಿದೆ ಈ ಕಾರ್ಯವು ಪ್ರಗತಿಯಲ್ಲಿದೆ

878(201) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅಂಗವಿಕಲರ ಸಂಖ್ಯೆ ಎಷ್ಟು (ಹೆಣ್ಣು ಮತ್ತು ಗಂಡು ಪ್ರತ್ಯೇಕವಾಗಿ ವಿವರ ಒದಗಿಸುವುದು),

ಆ) ಅಂಗವಿಕಲರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ,

ಇ) ಹಾಗಿದ್ದಲ್ಲಿ ಅಂಗವಿಕಲರ ಅಭಿವೃದ್ಧಿ ನಿಗಮ ರಚಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ,

ಈ) ಹಾಗಿಲ್ಲವಾದಲ್ಲಿ ಕಾರಣಗಳೇನು?

ಶ್ರೀ ಹೆಚ್ ಕೆ ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) 2001ರ ಜನಗಣತಿ ಪ್ರಕಾರ ರಾಜ್ಯದಲ್ಲಿರುವ ಒಟ್ಟು ಅಂಗವಿಕಲರ ಸಂಖ್ಯೆ 9,40,643 ಅದರಲ್ಲಿ –

ಗಂಡಸರು–5,37,730

ಹೆಂಗಸರು–4,02,913

ಆ) ಸರ್ಕಾರವು ಅಂಗವಿಕಲರ ಕಲ್ಯಾಣಕ್ಕಾಗಿ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಮನರ್ ವಸತಿ ಹಾಗೂ ಸಾಮಾಜಿಕ ಭದ್ರತೆ ಯೋಜನೆಗಳನ್ನು ಜಾರಿಗೊಳಿಸುತ್ತಿದೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಇ) ಹೌದು ಪರಿಶೀಲನೆಯಲ್ಲಿದೆ

ಈ) ಅನ್ವಯಿಸುವುದಿಲ್ಲ

ಅನುಬಂಧ

ಅಂಗವಿಕಲರಿಗೆ ಸರ್ಕಾರವು ಒದಗಿಸುತ್ತಿರುವ ಸೌಲಭ್ಯಗಳ ಮಾಹಿತಿಯು ಈ ಕೆಳಕಂಡಂತಿದೆ

1 ರಾಜ್ಯ ಸರ್ಕಾರವು ಅಂಗವಿಕಲ ಮಕ್ಕಳಿಗಾಗಿ (ನಾಲ್ಕು ಅಂಧ ಮಕ್ಕಳು + ನಾಲ್ಕು ಕಿವುಡು ಮತ್ತು ಮೂಕ ಮಕ್ಕಳ ಶಾಲೆ) 8 ವಿಶೇಷ ಶಾಲೆಗಳನ್ನು ನಡೆಸುತ್ತಿದ್ದು ಅಲ್ಲಿ ಓದುತ್ತಿರುವ ಅಂಧ ಮತ್ತು ಕಿವುಡು ಮಕ್ಕಳಿಗೆ ಉಚಿತವಾಗಿ ಊಟ, ವಸತಿ ಬಟ್ಟೆ ಬರೆ ಮತ್ತು ಪುಸ್ತಕಗಳನ್ನು ಒದಗಿಸಲಾಗುತ್ತಿದೆ